# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1000 |
| ಮಾನ್ಯ ಸದಸ್ಯರ ಹೆಸರು | ಶ್ರೀ ಟಿ. ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 24.02.2023 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | 2020ನೇ ಸಾಲಿನಲ್ಲಿ ಕಾಡುಗೊಲ್ಲ ಅಭಿವೃದ್ಧಿ ನಿಗಮವನ್ನು ಸ್ಥಾಪಿಸಲು ಸರ್ಕಾರವು ಘೋಷಣೆ ಮಾಡಿದ್ದು, ಇಲ್ಲಿಯವರೆಗೂ ಸದರಿ ನಿಗಮವು ಕಂಪನಿ ಕಾಯ್ದೆ 2013 ರನ್ವಯ ಸ್ಥಾಪನೆಯಾಗದೇ ಇರಲು ಕಾರಣವೇನು (ವಿವರ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ಹಿಂವಕ 155 ಬಿಸಿಎ.2020, ದಿನಾಂಕ:28/09/2020 ರಂದು ಕಾಡುಗೊಲ್ಲ ಅಭಿವೃದ್ಧಿ ನಿಗಮವನ್ನು ಸ್ಥಾಪಿಸಲಾಗಿರುತ್ತದೆ.<br><br>ನಿಗಮ ಸ್ಥಾಪನೆಯ ವಿಷಯವಾಗಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಕಾಡುಗೊಲ್ಲರ ಸಂಘವು ಸಲ್ಲಿಸಿದ್ದ ರಿಟ್ ಅರ್ಜಿ ಸಂಖ್ಯೆ:22686/2021ರ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯವು ನೀಡಿರುವ ಆದೇಶದನ್ವಯ ವಿಚಾರಣೆಗಳನ್ನು ನಡೆಸಿ ಅಗತ್ಯ ಮಾಹಿತಿಯನ್ನು ಪಡೆಯಲಾಗಿರುತ್ತದೆ.<br><br>ಪ್ರಸ್ತುತ, ಸರ್ಕಾರದ ಅಧಿಸೂಚನೆ ಸಂಖ್ಯೆ: ಹಿಂವಕ 31 ಬಿಸಿಎ 2023, ದಿನಾಂಕ:10/02/2023ರಲ್ಲಿ ಕಾಡುಗೊಲ್ಲ ನಿಗಮ ಸ್ಥಾಪನೆಯ ಮುಂದುವರೆದ ಕಾರ್ಯಗಳನ್ನು ಕೈಗೊಳ್ಳುವ ಸಲುವಾಗಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ ಇವರನ್ನು ಕಾಡುಗೊಲ್ಲ ನಿಗಮದ ವ್ಯವಸ್ಥಾಪಕ ನಿರ್ದೇಶಕರ ಹುದ್ದೆಯಲ್ಲಿ ಹೆಚ್ಚುವರಿ ಪ್ರಭಾರದಲ್ಲಿರಿಸಿ ಆದೇಶಿಸಲಾಗಿರುತ್ತದೆ. |
| ಆ) | ಕಾಡುಗೊಲ್ಲ ಅಭಿವೃದ್ಧಿ ನಿಗಮಕ್ಕೆ ಪೂರಕ ಅಂದಾಜು-2ರಲ್ಲಿ ಒದಗಿಸಲಾದ ಅನುದಾನ ಎಷ್ಟು; ಮಾರ್ಚ್ 2023ರ ಅಂತ್ಯದೊಳಗೆ ಕಾಡುಗೊಲ್ಲ ಜನಾಂಗದವರಿಗೆ ಯಾವ ರೀತಿ ನ್ಯಾಯ ಒದಗಿಸಲಾಗುವುದು: | ಸರ್ಕಾರದ ಆದೇಶ ಸಂಖ್ಯೆ: ಹಿಂವಕ 665 ಬಿಎಂಎಸ್ 2022, ದಿನಾಂಕ:17.11.2022 ರಲ್ಲಿ ಪೂರಕ ಅಂದಾಜು-01ರಲ್ಲಿ ಕಾಡುಗೊಲ್ಲ ಅಭಿವೃದ್ಧಿ ನಿಗಮಕ್ಕೆ ರೂ.17ಕೋಟಿಗಳನ್ನು ಒದಗಿಸಲಾಗಿದ್ದು, ಲೆಕ್ಕಶೀರ್ಷಿಕೆ:2225-03-001-0-05-103 ರಡಿ ಬಿಡುಗಡೆ ಮಾಡಿ ಆದೇಶಿಸಲಾಗಿರುತ್ತದೆ. |

| | | |
|---|---|---|
| ಇ) | ಕಳೆದ ಮೂರು ವರ್ಷಗಳಿಂದ ಕಾಡುಗೊಲ್ಲ ಸಮುದಾಯ ದವರಿಗೆ ಎಷ್ಟು ಸಾಲ-ಸಹಾಯಧನ ಒದಗಿಸಲಾಗಿದೆ: ಯೋಜನವಾರು ಭೌತಿಕ ಮತ್ತು ಆರ್ಥಿಕ ವಿವರ ನೀಡುವುದು: ಸದರಿ ಜನಾಂಗಕ್ಕೆ ಅನ್ಯಾಯ ವಾಗುತ್ತಿರುವ ಕುರಿತು ಸರ್ಕಾರದ ಕ್ರಮವೇನು? | ಮುಂದುವರೆದು, 2022-23ನೇ ಸಾಲಿನ ಆಯವ್ಯಯದಲ್ಲಿ ಕಾಡುಗೊಲ್ಲ ಅಭಿವೃದ್ಧಿ ನಿಗಮಕ್ಕೆ ರೂ.3ಕೋಟಿಗಳನ್ನು ಒದಗಿಸಲಾಗಿದ್ದು, ಒಟ್ಟಾರೆ ರೂ.20.00ಕೋಟಿಗಳನ್ನು ಒದಗಿಸಲಾಗಿರುತ್ತದೆ.<br><br>ಸದರಿ ನಿಗಮವನ್ನು ಕಂಪನಿ ಕಾಯ್ದೆ 2013 ರನ್ವಯ ನೋಂದಾಯಿಸಿ ಸ್ಥಾಪಿಸಲು ಅಗತ್ಯವಾದ Memorandum of Association and Articles of Associationನ್ನು ರಚಿಸಲು ಕ್ರಮವಹಿಸಲಾಗುತ್ತಿದ್ದು, ಇದನ್ನು ಅನುಮೋದನೆ ಪಡೆದ ಕೂಡಲೇ ನಿಗಮವನ್ನು ನೋಂದಾಯಿಸಿ, ನಿಗಮದ ಅನುದಾನಕ್ಕೆ ಅನುಗುಣವಾಗಿ ಯೋಜನೆವಾರು ಭೌತಿಕ ಮತ್ತು ಆರ್ಥಿಕ ಗುರಿ ನಿಗದಿಪಡಿಸಿ ಕ್ರಿಯಾ ಯೋಜನೆ ರೂಪಿಸಿ ಕ್ರಮವಹಿಸಲಾಗುವುದು. |

ಸಂಖ್ಯೆ: ಹಿಂವಕ 83 ಬಿಸಿಎ 2023

(ಕೋಟಾ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು